# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಸ್.ದಯಾನಂದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣಗಾಲ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಮತ್ತು ಶ್ರೀ ಆರ್.ಬಿ.ಚನ್ನಬಸನ್ನವರ, ಕಾರ್ಯದರ್ಶಿ, ಗೋಟೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:** ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/Uplok/BGM/2165/2013/PP, ದಿ:19.12.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತ ರವರು ದಿನಾಂಕ: 08.12.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಹನಮಂತ ಮಲ್ಲಪ್ಪ ಶೇಖನ್ನವರ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಸಲ್ಲಿಸಿದ ದೂರಿನನ್ವಯ ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕಿನ ಗೋಟೂರ ಗ್ರಾಮ ಪಂಚಾಯತಿಯಲ್ಲಿ 2013-14 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅರಣ್ಯೀಕರಣ ಕಾಮಗಾರಿಯಲ್ಲಿ ನಡೆಸಿರುವ ಅವ್ಯವಹಾರದ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆ ಕೈಗೊಂಡಿದ್ದು, ಕೆಳಗಿನ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದಾಗಿ ತಿಳಿಸಿರುತ್ತಾರೆ.

> "ಗೋಟೂರ ಗ್ರಾಮ ಪಂಚಾಯತಿಯಲ್ಲಿ 2013-14 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅರಣ್ಯೀಕರಣ ಕಾಮಗಾರಿಯಲ್ಲಿ ಮೃತಪಟ್ಟವರ ಹೆಸರುಗಳನ್ನು ಕೆಲಸ ನಿರ್ವಹಿಸಿರುವುದಾಗಿ ಎನ್.ಎಂ.ಆರ್. ನಮೂನೆಯಲ್ಲಿ ನಮೂದಿಸಿದ್ದು, ಸದರಿ ಮೃತಪಟ್ಟವರ ಬ್ಯಾಂಕ್ ಖಾತೆಗೆ ಕೂಲಿ ಹಣವನ್ನು ಜಮಾ ಮಾಡಿರುತ್ತಾರೆ ಹಾಗೂ ಗಿಡ ನೆಡುವ ಕಾಮಗಾರಿಯನ್ನು ನಿರ್ವಹಿಸದೆ, ಒಟ್ಟಾರೆ ರೂ.1,68,000/- ಗಳನ್ನು ಪಾವತಿ ಮಾಡಿರುವುದು ಕಂಡು ಬರುತ್ತದೆ. ಈ ಸಂಬಂಧ ನಿರ್ವಹಿಸಿರುವ ದಾಖಲೆಗಳು ಹಾಗೂ ಭಾವಚಿತ್ರಗಳು ಹೊಂದಾಣಿಕೆ ಆಗುವುದಿಲ್ಲವೆಂದು ಹಾಗೂ 2012-13 ನೇ ಸಾಲಿನ ನಿಧಿ-1 ಮತ್ತು ನಿಧಿ-2 ರ ಅನುದಾನದಲ್ಲಿ ಖರ್ಚಿಗೆ ಸಂಬಂಧಿಸಿದ ದಾಖಲೆಗಳನ್ನು ಹಾಗೂ ವೋಚರ್‌ಗಳನ್ನು ಸಮರ್ಪಕವಾಗಿ ನಿರ್ವಹಿಸಿದೆ ಯಾವುದೇ ಅಧಿಕಾರಿಗಳ ಮೇಲುರುಜು ಇಲ್ಲದಿರುವುದು ಕಂಡುಬಂದಿದ್ದುಮ, ಆರೋಪಗಳು ಮೇಲೋಟಕ್ಕೆ ಸಾಭೀತಾಗಿರುತ್ತವೆಂದು ವರದಿಯಲ್ಲಿ ತಿಳಿಸಿರುತ್ತಾರೆ."

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಹಾಗೂ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಶ್ರೀ ಎಸ್.ದಯಾನಂದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣಗಾಲ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಮತ್ತು ಶ್ರೀ ಆರ್.ಬಿ.ಚನ್ನಬಸನ್ನವರ, ಕಾರ್ಯದರ್ಶಿ, ಗೋಟೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕ್ರಮ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಎಸ್.ದಯಾನಂದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣಗಾಲ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಮತ್ತು ಶ್ರೀ ಆರ್.ಬಿ.ಚನ್ನಬಸನ್ನವರ, ಕಾರ್ಯದರ್ಶಿ, ಗೋಟೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 908 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 06.01.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಸ್.ದಯಾನಂದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣಗಾಲ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಮತ್ತು ಶ್ರೀ ಆರ್.ಬಿ.ಚನ್ನಬಸನ್ನವರ, ಕಾರ್ಯದರ್ಶಿ, ಗೋಟೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
(ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾದ ಎಲ್ಲಾ ಮೂಲ ದಾಖಲಾತಿಗಳನ್ನು ಈ ಆದೇಶದೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ಹುಕ್ಕೇರಿ ತಾಲ್ಲೂಕು ಪಂಚಾಯತಿ, ಹುಕ್ಕೇರಿ, ಬೆಳಗಾವಿ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಎಸ್.ದಯಾನಂದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣಗಾಲ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
7) ಶ್ರೀ ಆರ್.ಬಿ.ಚನ್ನಬಸನ್ನವರ, ಕಾರ್ಯದರ್ಶಿ, ಗೋಟೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.